**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಡಿಟಿಇ 20 ಇಎಸ್‌ಟಿ(8) 2023

**ಆಯುಕ್ತರ ಕಛೇರಿ,**
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ:01-08-2023

## ಅಧಿಸೂಚನೆ

ವಿಷಯ: 2023-24 ನೇ ಸಾಲಿನ ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ:29-01-2021 ರಂತೆ ಅಧಿಸೂಚಿಸಲಾದ ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ ನಿಯಮಗಳು-2021
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 137 ಡಿಟಿಇ 2020 ದಿನಾಂಕ: 29-06-2021.
3. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:06-07-2023.
4. ಈ ಕಛೇರಿ ಅಧಿಸೂಚನೆ ಸಂಖ್ಯೆ: ಡಿಟಿಇ 20 ಇಎಸ್‌ಟಿ (8) 2023 ದಿ:20-07-2023.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 335 ಟಿಇಸಿ 2023 ದಿ:01-08-2023.

** ** **

ತಾಂತ್ರಿಕ ಶಿಕ್ಷಣ ಇಲಾಖೆ ಅಧೀನದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕರ (ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಎ), ಸಹಾಯಕ ಪ್ರಾಧ್ಯಾಪಕರು (ಗ್ರೂಪ್-ಬಿ), ಗ್ರಂಥಪಾಲಕರು ಮತ್ತು ಕ್ರೀಡಾ & ದೈಹಿಕ ಶಿಕ್ಷಣ ನಿರ್ದೇಶಕರು) ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕರ ವರ್ಗಾವಣೆಯನ್ನು ನಿಯಂತ್ರಿಸುವ ಸಲುವಾಗಿ ರೂಪಿಸಲಾದ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ರನ್ವಯ ಮಂಜೂರಾದ ಬೋಧಕರ ಹುದ್ದೆಗಳ ಶೇಕಡಾ 9ರಷ್ಟು ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆಗಳು ಹಾಗೂ ಶೇಕಡಾ 6 ರಷ್ಟು ವಿಶೇಷ ಪ್ರಕರಣಗಳ ಕೋರಿಕೆ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಲು ಉದ್ದೇಶಿಸಿ ವೇಳಾಪಟ್ಟಿಯನ್ನು ಪ್ರಕಟಿಸಿ, ಸಾರ್ವಜನಿಕ ವರ್ಗಾವಣೆಯಿಂದ ವಿನಾಯಿತಿ ಬಯಸುವ ಬೋಧಕರು ಮತ್ತು ವಿಶೇಷ ಪ್ರಕರಣಗಳಡಿ ಕೋರಿಕೆ ವರ್ಗಾವಣೆ ಬಯಸುವ ಬೋಧಕರು ಅಗತ್ಯ ಮಾಹಿತಿಗಳೊಂದಿಗೆ ಮನವಿಗಳನ್ನು ಕಡ್ಡಾಯವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯಗೊಳಿಸುವ ಅನ್‌ಲೈನ್ (Online) ನಮೂನೆಯಲ್ಲಿ ದಿನಾಂಕ: 12-07-2023 ರೊಳಗಾಗಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನಿಗದಿಪಡಿಸಲಾಗಿತ್ತು.

ಅದರಂತೆ, ಸ್ವೀಕೃತವಾದ ಮನವಿಗಳನ್ವಯ ಪರಿಶೀಲಿಸಿ ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಹಾಗೂ ವಿಶೇಷ ಪ್ರಕರಣಗಳ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿ ಪ್ರಕಟಣಾ ದಿನಾಂಕ:19-07-2023 ರಂದು ನಿಗದಿಪಡಿಸಲಾಗಿತ್ತು. ನಿಗದಿತ ದಿನಾಂಕದೊಳಗೆ ಗಂಭೀರ ಖಾಯಿಲೆಗಳ ವೈದ್ಯಕೀಯ ತಪಾಸಣೆ ವಿಳಂಬವಾದ ಹಿನ್ನಲೆಯಲ್ಲಿ ಉಲ್ಲೇಖ (5) ರ ಅಧಿಸೂಚನೆಯಲ್ಲಿ ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ತಾಂತ್ರಿಕ ಶಿಕ್ಷಣ ಇಲಾಖೆಯ ಬೋಧಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2021 ರ ನಿಯಮ 8 ರನ್ವಯ ಬೋಧಕ ವರ್ಗಾವಣೆಯನ್ನು

ಕ್ಯಾಲೆಂಡರ್ ವರ್ಷದ ಮೇ ಮತ್ತು ಜುಲೈ ಮಾಹೆಯ ನಡುವೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಪ್ರಸಕ್ತ 2023-24 ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕ ಸಿಬ್ಬಂದಿಗಳ ವರ್ಗಾವಣೆ ಪ್ರಕ್ರಿಯೆಯನ್ನು ನಿಗದಿತ ಅವಧಿಯೊಳಗಾಗಿ ಪ್ರಾರಂಭಿಸಲು ತಡವಾಗಿರುವುದರಿಂದ, ಸದರಿ ವರ್ಗಾವಣೆ ಪ್ರಕ್ರಿಯೆಯನ್ನು ದಿನಾಂಕ: 10-08-2023 ರ ಒಳಗಾಗಿ ಪೂರ್ಣಗೊಳಿಸಲು ಅನುಮತಿ ನೀಡಿ ಆದೇಶಿಸಿರುವ ಹಿನ್ನಲೆಯಲ್ಲಿ ವರ್ಗಾವಣೆ ಪ್ರಕ್ರಿಯೆ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪರಿಷ್ಕರಿಸಲಾಗಿದೆ.

**<u>ಪರಿಷ್ಕೃತ ತಾತ್ಕಾಲಿಕ ವೇಳಾಪಟ್ಟಿ:</u>**

| ಕ್ರ. ಸಂ. | ವಿವರ | ದಿನಾಂಕ: |
|---|---|---|
| 1 | ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಹಾಗೂ ವಿಶೇಷ ಪ್ರಕರಣಗಳ ಪರಿಷ್ಕೃತ ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿ ಪ್ರಕಟಣಾ ದಿನಾಂಕ. | 01-08-2023 |
| 3 | ತಾತ್ಕಾಲಿಕ ವರ್ಗಾವಣಾ ಆದ್ಯತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಕೊನೆಯ ದಿನಾಂಕ. | 03-08-2023 |
| 4 | ವಿಶೇಷ ಪ್ರಕರಣಗಳ ಹಾಗೂ ಸಾರ್ವಜನಿಕ ಹಿತಾಸಕ್ತಿಯ ಅಂತಿಮ ವರ್ಗಾವಣೆ ಆದ್ಯತಾ ಪಟ್ಟಿ ಮತ್ತು ಕೌನ್ಸಿಲಿಂಗ್ ಮೂಲಕ ಭರ್ತಿ ಮಾಡಲು ಖಾಲಿ ಹುದ್ದೆಗಳ ಪಟ್ಟಿ ಪ್ರಕಟಣೆ. | 05-08-2023 |
| 5 | ವಿಶೇಷ ಪ್ರಕರಣಗಳ 1st Round ಕೌನ್ಸಿಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 07-08-2023 |
| 6 | ವಿಶೇಷ ಪ್ರಕರಣಗಳ 2nd Round ಕೌನ್ಸಿಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 08-08-2023 |
| 7 | ಸಾರ್ವಜನಿಕ ಹಿತಾಸಕ್ತಿಯ ವರ್ಗಾವಣೆ ಕೌನ್ಸಿಲಿಂಗ್ (ವಿವರವಾದ ವೇಳಾಪಟ್ಟಿಯನ್ನು ಅಂತಿಮ ವೇಳಾಪಟ್ಟ ಪ್ರಕಟಣೆ ನಂತರ ಪ್ರಕಟಿಸಲಾಗುವುದು) | 09-08-2023 ರಿಂದ 10-08-2023 |

**ಉಳಿದಂತೆ ದಿನಾಂಕ:06-07-2023 ರ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ. ವರ್ಗಾವಣೆ ಸಂಬಂಧಸಿದಂತೆ ಮಾಹಿತಿಗಳನ್ನು ಕಾಲಕಾಲಕ್ಕೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.**

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.

**ಪ್ರತಿಯನ್ನು :**

1. ಮಾನ್ಯ ಆಯುಕ್ತರ ಅಪ್ತ ಶಾಖೆಗೆ.
2. ಮಾನ್ಯ ನಿರ್ದೇಶಕರ ಅಪ್ತ ಶಾಖೆಗೆ.
3. ಜಂಟಿ ನಿರ್ದೇಶಕರು (ಆಡಳಿತ) ಅಪ್ತ ಶಾಖೆಗೆ.
4. ಇ- ಆಡಳಿತ ವಿಭಾಗಕ್ಕೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಚುರ ಪಡಿಸಲು.
5. ಕಛೇರಿ ಪ್ರತಿ.

ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 335 ಟಿಇಸಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:01-08-2023

## ಅಧಿಸೂಚನೆ

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ತಾಂತ್ರಿಕ ಬೋಧಕ ಸಿಬ್ಬಂದಿಗಳ ವರ್ಗಾವಣೆ ನಿಯಂತ್ರಣ) ನಿಯಮಗಳು-2021ರ ನಿಯಮ 8 ರನ್ವಯ ಬೋಧಕರ ವರ್ಗಾವಣೆಗಳನ್ನು ಕ್ಯಾಲೆಂಡರ್ ವರ್ಷದ ಮೇ ಮತ್ತು ಜುಲೈ ಮಾಹೆಯ ನಡುವೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದ್ದು, ಪ್ರಸಕ್ತ 2023-24ನೇ ಸಾಲಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಬೋಧಕ ಸಿಬ್ಬಂದಿಗಳ ವರ್ಗಾವಣೆ ಪ್ರಕ್ರಿಯೆಯನ್ನು ನಿಗಧಿತ ಅವಧಿಯೊಳಗಾಗಿ ಪ್ರಾರಂಭಿಸಲು ತಡವಾಗುವುದರಿಂದ, ಸದರಿ ವರ್ಗಾವಣೆ ಪ್ರಕ್ರಿಯೆಯನ್ನು ದಿನಾಂಕ:10.08.2023ರ ಒಳಗಾಗಿ ಪೂರ್ಣಗೊಳಿಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

1/8/2023
**(ಮಹಾಂತಪ್ಪ ಎಸ್.ತುರಕನೂರ)**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ)

**ಇವರಿಗೆ,**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು.
3. ಇ-ಆಡಳಿತ (ಅಂತರ್ಜಾಲದಲ್ಲಿ ಪ್ರಕಟಿಸಲು) / ಶಾಖಾ ರಕ್ಷಾ ಕಡತ

EST 8
01/08/23